ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ಸರಣಿ ಬ್ಯಾರೇಜ್ ಕಾಮಗಾರಿಯಲ್ಲಿ ವ್ಯಾಪಕ ಭ್ರಷ್ಟಚಾರವಾಗಿರುವ ಬಗ್ಗೆ

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ(ವಿಧಾನಸಭೆಯಿಂದ ಚುನಾಯಿತರಾದವರು) –

340 (437) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೀದರ್ ಜಿಲ್ಲೆಯ ಮಾಂಜ್ರಾ ಸರಣಿ ಬ್ಯಾರೇಜ್‌ಗಳಲ್ಲಿನ ಗೇಟ್ ಸಮಸ್ಯೆಯಾಗಿ ನೀರು ನಿಲ್ಲದಿರುವುದರ ಬಗ್ಗೆ ತನಿಖೆಗೆ ಹೈಕೋರ್ಟ್ ಆದೇಶಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ; ಅದರ ಸಂಪೂರ್ಣ ವಿವರ ನೀಡುವುದು;

(ಆ) 04 ಬ್ಯಾರೇಜ್‌ಗಳ ನಿರ್ಮಾಣಕ್ಕೆ ಖರ್ಚು ಮಾಡಲಾಗಿರುವ ಹಣವೆಷ್ಟು;ಮತ್ತು ಯಾವ ವರ್ಷದಲ್ಲಿ ಬ್ಯಾರೇಜ್‌ಗಳನ್ನು ನಿರ್ಮಾಣ ಮಾಡಲಾಗಿದೆ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಈ ಸರಣಿ ಬ್ಯಾರೇಜ್‌ಗಳ ನಿರ್ಮಾಣದಿಂದ ಒಟ್ಟು ಎಷ್ಟು ಎಕರೆ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಲಾಗಿದೇ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಹಾಗಿದ್ದಲ್ಲಿ, ನೂರಾರು ಕೋಟಿ ರೂಪಾಯಿ ವೆಚ್ಚ ಮಾಡಿ ನಿರ್ಮಾಣ ಮಾಡಲಾದ ಯೋಜನೆಯಲ್ಲಿ ಅಕ್ರಮ ಮತ್ತು ಲೋಪದೋಷಗಳು ಉಂಟಾಗಲು ಕಾರಣಗಳೇನು; ಇದಕ್ಕೆ ಕಾರಣರಾದವರುಗಳ ವಿರುದ್ದ ಯಾವ ಕ್ರಮ ಕೈಗೊಳ್ಳಲಾಗಿದೇ? (ಸಂಪೂರ್ಣ ಮಾಹಿತಿ ನೀಡುವುದು)